# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 98 (694) |
| ಉತ್ತರಿಸುವ ದಿನಾಂಕ | 12-07-2023 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮುನಿರಾಜು ಗೌಡ ಪಿ.ಎಂ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮುದ್ರಾಂಕ ಶುಲ್ಕವನ್ನು ಹೆಚ್ಚಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚಳ ಮಾಡಲಾಗುವುದು; | ಕರ್ನಾಟಕ ಮುದ್ರಾಂಕ ಕಾಯ್ದೆ 1957 ರಲ್ಲಿನ ಷೆಡ್ಯೂಲ್‌ನಲ್ಲಿರುವ ಅನುಚ್ಛೇದಗಳಂತೆ ಮುದ್ರಾಂಕ ಶುಲ್ಕಗಳನ್ನು ಆಕರಿಸಲಾಗುತ್ತಿದ್ದು, ಪ್ರಸ್ತುತ ಕ್ರಯಪತ್ರಗಳಿಗೆ ಅನುಚ್ಛೇದ 20(1) ರನ್ವಯ ಶೇಕಡ 5% ರಷ್ಟು ಮುದ್ರಾಂಕ ಶುಲ್ಕವನ್ನು ಆಕರಿಸಲಾಗುತ್ತದೆ. ಸದರಿ ಮುದ್ರಾಂಕ ಶುಲ್ಕವನ್ನು ಹೆಚ್ಚಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ. |
| ಆ | 35 ಲಕ್ಷ ರೂ.ನಿಂದ 45 ಲಕ್ಷ ರೂ.ವರೆಗಿನ ಫ್ಲಾಟ್‌ಗಳಿಗೆ ಈ ಹಿಂದಿನ ಸರ್ಕಾರ ಕಡಿತ ಮಾಡಿದ್ದ ಮುದ್ರಾಂಕ ಶುಲ್ಕದ ಪ್ರಮಾಣ ಎಷ್ಟು; ಸದರಿ ಶುಲ್ಕವನ್ನು ಸಹ ಹೆಚ್ಚಳ ಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಹೆಚ್ಚಳ ಮಾಡಲಾಗುವುದು; | ಮಾರುಕಟ್ಟೆ ಬೆಲೆ ಹೆಚ್ಚಿಸಲು 35 ಲಕ್ಷ ರೂ. ನಿಂದ 45 ಲಕ್ಷ ರೂ.ವರೆಗಿನ ಅಪಾರ್ಟ್‌ಮೆಂಟ್ ಅಥವಾ ಫ್ಲಾಟ್‌ಗಳ ಮೊದಲನೇ ಕ್ರಯದ ಮುದ್ರಾಂಕ ಶುಲ್ಕವನ್ನು ಶೇಕಡ 5% ರಿಂದ 3% ರಷ್ಟು ಕಡಿತ ಮಾಡಲಾಗಿತ್ತು.<br><br>ಸದರಿ ಶುಲ್ಕವನ್ನು ಹೆಚ್ಚಳ ಮಾಡುವ ಪ್ರಸ್ತಾವ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ | ಮುದ್ರಾಂಕ ಶುಲ್ಕವನ್ನು ಹೆಚ್ಚಳ ಮಾಡುವುದರಿಂದ ಜನ ಸಾಮಾನ್ಯರು ಫ್ಲಾಟ್, ನಿವೇಶನ ಮತ್ತು ಮನೆಗಳನ್ನು ಕೊಳ್ಳಲು ತೊಂದರೆಯಾಗುವುದಿಲ್ಲವೆ; | ಅನ್ವಯಿಸುವುದಿಲ್ಲ. |
| ಈ | ಕಳೆದ ಐದು ವರ್ಷಗಳಲ್ಲಿ ಸಂಗ್ರಹವಾದ ನೋಂದಣಿ ಮತ್ತು ಮುದ್ರಾಂಕ ಶುಲ್ಕ ಎಷ್ಟು? (ವರ್ಷವಾರು ವಿವರ ನೀಡುವುದು) | (see table below) |

| ಕ್ರ. ಸಂ. | ವರ್ಷ | ನೋಂದಣಿ ಮತ್ತು ಮುದ್ರಾಂಕ ಶುಲ್ಕ |
|---|---|---|
| 1 | 2018-19 | ರೂ.10845.04 |
| 2 | 2019-20 | ರೂ.11451.05 |
| 3 | 2020-21 | ರೂ.10705.16 |
| 4 | 2021-22 | ರೂ.14246.02 |
| 5 | 2022-23 | ರೂ.17873.97 |

ಕಂಇ/126/ಎಂಎನ್‌ಎಸ್‌ಎ/2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು